# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ಗುರುತಿನ ಪ್ರಶ್ನೆ**

ದಿನಾಂಕ : 04-03-2021 ಪ್ರಶ್ನೆ ಸಂಖ್ಯೆ : 97 (709)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಆರ್. ಧರ್ಮಸೇನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 04-03-2021

ಉತ್ತರಿಸುವ ಸಚಿವರು: ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು

ವಿಷಯ : ಪೊಲೀಸ್ ಠಾಣೆಗಳಲ್ಲಿ ಸಾರ್ವಜನಿಕರ ಸಭೆ ನಡೆಸುವ ಬಗ್ಗೆ

(ಅ) ಸಾರ್ವಜನಿಕರ ದೂರು ಮತ್ತು ಕುಂದು ಕೊರತೆಗಳನ್ನು ಆಲಿಸಿ ಸೂಕ್ತ ಕ್ರಮಗಳನ್ನು ಕೈಗೊಳ್ಳಲು ಪೊಲೀಸ್ ಠಾಣೆಗಳಲ್ಲಿ ಸಾರ್ವಜನಿಕರ ಸಂಪರ್ಕ ಸಭೆಗಳನ್ನು ಪೊಲೀಸ್ ಅಧಿಕಾರಿಗಳು ನಡೆಸುತ್ತಿದ್ದಾರೆಯೇ;

(ಆ) ಕಳೆದ ಒಂದು ವರ್ಷದಲ್ಲಿ ಬೆಂಗಳೂರು ನಗರದ ಪೊಲೀಸ್ ಠಾಣೆಗಳಲ್ಲಿ ನಡೆಸಿರುವ ಸಭೆಗಳೆಷ್ಟು; ಸಭೆ ನಡೆಸಿರುವ ಅಧಿಕಾರಿಗಳು ಯಾರು ಯಾರು;

(ಇ) ಈ ಬಗ್ಗೆ ಮಾಹಿತಿಗಳನ್ನು ಪತ್ರಿಕೆಗಳಲ್ಲಿ ಮತ್ತು ಟಿ.ವಿ. ಮಾಧ್ಯಮಗಳಲ್ಲಿ ಸಾರ್ವಜನಿಕರಿಗೆ ನೀಡಲಾಗುತ್ತಿದೆಯೇ; ಇದಕ್ಕಾಗಿ ಮಾಡಲಾಗುತ್ತಿರುವ ವ್ಯವಸ್ಥೆ ಏನು?